ಜೆಎಸ್‌ಎಸ್ ಮಹಾವಿದ್ಯಾಪೀಠ

# ಜೆಎಸ್‌ಎಸ್ ಮಹಿಳಾ ಕಾಲೇಜು

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜಿತ, ನ್ಯಾಕ್‌ನಿಂದ B+ (CGPA: 2.74) ಮಾನ್ಯತೆ ಪಡೆದಿದೆ

**ಕೊಳ್ಳೇಗಾಲ – 571 440 ಚಾಮರಾಜನಗರ ಜಿಲ್ಲೆ**

☎: 08224-252149 🖷: 08224-256051 jsscwk@gmail.com www. jsscwkgl.org

**ಶ್ರೀ ಮತ್ತುಸತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀ ಮನ್ಮಹಾರಾಜ ರಾಜಗುರುತಿಲಕ ಪರಮಪೂಜ್ಯ ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶತ್ತೋತ್ತರ ದಶಮಾನೋತ್ಸವ (110ನೆಯ ಜಯಂತಿ)**

**ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ಶ್ರೀಗಳ ಕೊಡುಗೆ ಅಪಾರ – ಶ್ರೀ ಶಂಕರ ದೇವನೂರು**

ಕೊಳ್ಳೇಗಾಲ 23.9.2025 ರಂದು ಕೊಳ್ಳೇಗಾಲದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಸಮುಚ್ಛಯದಲ್ಲಿ ಶ್ರೀ ಮತ್ತುಸತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀ ಮನ್ಮಹಾರಾಜ ರಾಜಗುರುತಿಲಕ ಪರಮಪೂಜ್ಯ ಜಗದ್ಗುರು ಡಾ ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 110ನೆಯ ಜಯಂತಿ ಮಹೋತ್ಸವ ಸಮಾರಂಭವನ್ನು ಆಯೋಜಿಸಲಾಗಿತ್ತು.

ಬೆಳಗ್ಗೆ 8.30ಗಂಟೆಗೆ ಪೂಜ್ಯ ರಾಜೇಂದ್ರ ಶ್ರೀಗಳವರ ಭಾವಚಿತ್ರದ ಪಲ್ಲಕ್ಕಿ ಮೆರವಣಿಗೆಗೆ ಹನೂರಿನ ಯುವ ಮುಖಂಡರು ಹಾಗೂ ಉದ್ಯಮಿಗಳಾದ ಶ್ರೀ ಎಸ್. ನಿಶಾಂತ್‌ರವರು ಪುಷ್ಪಾರ್ಜನೆ ಮಾಡುವ ಮೂಲಕ ಚಾಲನೆ ನೀಡಿದರು.

ಶ್ರೀ ಮಠದ ಭಕ್ತರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಜೆಎಸ್‌ಎಸ್ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ನಂದಿಧ್ವಜ, ವೀರಗಾಸೆ ಜನಪದ ಕಲಾ ತಂಡಗಳು ಭಾಗವಹಿಸಿದ್ದು ಕೊಳ್ಳೇಗಾಲದ ಪ್ರಮುಖ ಬೀದಿಗಳಲ್ಲಿ ನಡೆದ ಮೆರವಣಿಗೆ ಉತ್ಸವಕ್ಕೆ ಮೆರುಗು ನೀಡಿತು.

ಬೆಳಗ್ಗೆ 11.00 ಗಂಟೆಗೆ ಸಭಾ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಮಾಜಿ ಶಾಸಕರಾದ ಶ್ರೀಮತಿ ಪರಿಮಳಾ ನಾಗಪ್ಪನವರು ಉದ್ಘಾಟನೆ ಮಾಡಿ ಪರಮಪೂಜ್ಯ ಡಾ ಶ್ರೀ ರಾಜೇಂದ್ರ ಮಹಾಸ್ವಾಮಿಗಳವರು ಸದಾ ನಗುಮುಖದ ಕಾಂತಿವುಳ್ಳವರು, ಯಾವುದೇ ಸಮಸ್ಯೆಗಳಿಗೆ ಪರಿಹಾರ ತಿಳಿಸುವ ತಾಯಿ ಹೃದಯವುಳ್ಳವರು. ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಶ್ರಮದ ಫಲವಾಗಿ ಇಂದಿನ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ಜನ್ಮತಾಳಿವೆ. ಗ್ರಾಮೀಣ ಪ್ರದೇಶದ ಪ್ರತಿಭೆಗಳು ಅನಾವರಣಗೊಳ್ಳಲು ಶ್ರೀಗಳು ಕಾರಣ ಕರ್ತರಾಗಿದ್ದಾರೆ. ಶ್ರೀಗಳವರ ಆಶೀರ್ವಾದ ನಮ್ಮೆಲ್ಲರ ಮೇಲೆ ಇರಲಿ ಎಂದು ಪ್ರಾರ್ಥಿಸಿದರು.

ಸಂಸ್ಕೃತಿ ಚಿಂತಕರು ಹಾಗೂ ನಿವೃತ್ತ ಮುಖ್ಯ ಅಭಿಯಂತರರಾದ ಶ್ರೀ ಶಂಕರ್ ದೇವನೂರು ರವರು ನಮ್ಮ ಬದುಕು ರಾಜೇಂದ್ರ ಶ್ರೀಗಳಂತಾಗಬೇಕು, ಹತ್ತೂರು ಸುತ್ತಿ ನೋಡೋ ಬದಲು ಸುತ್ತೂರು ನೋಡು, ಅದು ಕೇವಲ ಭೌಗೋಳಿಕವಾಗಿ ಮಾತ್ರವಲ್ಲ, ಆಧ್ಯಾತ್ಮಿಕವಾಗಿ, ಸಾಂಸ್ಕೃತಿಕವಾಗಿ ಅನನ್ಯವಾದುದು. ಶಿವರಾತ್ರಿಶ್ವರರ ಶಕ್ತಿ ಅನನ್ಯ. ಸುತ್ತೂರಿನ ಗುರು ಪರಂಪರೆಯ ಅರಿವು ವಿದ್ಯಾರ್ಥಿಗಳಿಗೆ ಅತ್ಯಗತ್ಯ. ಗುರು ಪರಂಪರೆಯ 23ನೇ ಗುರುಗಳಾಗಿ ಕಷ್ಟದ ಕುಲುಮೆಯಲ್ಲಿ ಬೆಂದ ಪೂಜ್ಯರ ಜೀವನ ವಿದ್ಯಾರ್ಥಿಗಳಿಗೆ ಆದರ್ಶವಾಗಬೇಕು. ನಾನಲ್ಲ ನಾವು ಎಂಬ ಮನೋಭಾವ ಮೂಡಬೇಕು. ಮನುಷ್ಯರಾಗಿ ಹುಟ್ಟಿಲ್ಲ; ಮನುಷ್ಯರಾಗಲು ಹುಟ್ಟಿದ್ದೇನೆ, ಅದಕ್ಕೆ ಸಂಸ್ಕಾರ ಅಗತ್ಯ. ಅದನ್ನು ರೂಪಿಸಿದವರು ರಾಜೇಂದ್ರ ಶ್ರೀಗಳು. ಕಲಿತವರಿಗಿಂತ ಕರಗುವವರು ಮುಖ್ಯ. ಅಹಂಕಾರ ಅಲಂಕಾರವಾಗಬಾರದು. ಪ್ರತಿಭೆಯನ್ನು ಗುರುತಿಸುವ ಯೋಗ್ಯತೆ ಕೂಡ ನಮ್ಮದಾಗಬೇಕು.

ವೈಭವವಾಗಿ ಆಚರಿಸುವುದು ಜಯಂತಿಯಲ್ಲ, ನಡೆ–ನುಡಿ ಒಂದಾದ ಬದುಕು ನಮ್ಮದಾಗಬೇಕು. ಪ್ರಸ್ತುತ ಸಮಾಜಕ್ಕೆ ರಾಜೇಂದ್ರ ಶ್ರೀಯವರ ಚಿಂತನೆಗಳ ನೆನಪು ಅಗತ್ಯವಾಗಿದೆ. ನನ್ನ ಜೀವನದ ಬೆಳಕು ರಾಜೇಂದ್ರ ಶ್ರೀಗಳು, ಕಳ್ಳ ಕದಿಯಲಾಗದ ಏಕೈಕ ಸಂಪತ್ತು ಅಂದರೆ ಅದು ಶ್ರೀಗಳು ನೀಡಿದ ಶಿಕ್ಷಣವಾಗಿದೆ ಎಂದು ಶ್ಲಾಘಿಸಿದರು.

ಚಾಮುಲ್ ಅಧ್ಯಕ್ಷರಾದ ಶ್ರೀ ಎಂ ನಂಜುಂಡಸ್ವಾಮಿರವರು ರಾಜೇಂದ್ರ ಶ್ರೀಗಳವರ ಶತ್ತೋತ್ತರ ದಶಮಾನೋತ್ಸವವು ಅದ್ದೂರಿಯಾಗಿ ನಡೆದಿದ್ದು. ರಾಜೇಂದ್ರ ಶ್ರಿಗಳು ಶಿಕ್ಷಣ ಕ್ರಾಂತಿ ಮಾಡಿ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಪ್ರಾಮುಖ್ಯತೆ ನೀಡಿ, ಸಾಮಾಜಿಕವಾಗಿ ಮುನ್ನೆಲೆಗೆ ತಂದಿದ್ದಾರೆ. ಅವರು ಹಾಕಿಕೊಟ್ಟ ದಾರಿಯಲ್ಲಿ ನಾವು ನಡೆಯಬೇಕು ಎಂದು ತಿಳಿಸಿದರು.

ಹನೂರಿನ ಯುವ ಮುಖಂಡರು ಹಾಗೂ ಉದ್ಯಮಿಗಳಾದ ಶ್ರೀ ಎಸ್ ನಿಶಾಂತ್‌ರವರು ಮಾತನಾಡಿ ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ ಕಾಲೇಜುಗಳನ್ನು ತೆರೆದು ಹೆಣ್ಣು ಮಕ್ಕಳ ಬಾಲ್ಯ ವಿವಾಹ ತಡೆಯುವಲ್ಲಿ ಜೆಎಸ್‌ಎಸ್ ಶಿಕ್ಷಣ ಸಂಸ್ಥೆ ಶ್ರಮಿಸಿದೆ. ಶಿಕ್ಷಣದಿಂದ ನಾಡಿನ ಪ್ರಗತಿ ಸಾಧ್ಯ. ಒಳ್ಳೆಯ ಸಂಸ್ಕಾರ ರೂಢಿಸಿಕೊಳ್ಳಬೇಕಾದರೆ ಶ್ರೀಗಳನ್ನು ಸ್ಮರಿಸಬೇಕು. ಅವರ ಹಾದಿಯಲ್ಲಿ ನಾವು ನಡೆಯಬೇಕು ಶ್ರೀಗಳಿಗೆ ನಾವೆಲ್ಲರೂ ಚಿರಋಣಿಗಳಾಗಿರಬೇಕು ಎಂದು ಹೇಳಿದರು.

ಅಧ್ಯಕ್ಷತೆಯನ್ನು ವಹಿಸಿದ್ದ ಶ್ರೀ ಎ.ಆರ್ ಕೃಷ್ಣಮೂರ್ತಿ, ವಿಧಾನ ಸಭಾ ಸದಸ್ಯರು, ಕೊಳ್ಳೇಗಾಲ ಇವರು ರಾಜೇಂದ್ರ ಶ್ರೀಗಳವರು ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಗಮನಾರ್ಹವಾದುದು. ಮೈಸೂರು ಮಹಾರಾಜರಾದ ಶ್ರೀ ಜಯಚಾಮರಾಜೇಂದ್ರ ಒಡೆಯರ್ ಅವರು ಶ್ರೀಗಳಿಗೆ ರಾಜಗುರುತಿಲಕ ಬಿರುದನ್ನು ಕೊಟ್ಟು ಗೌರವಿಸಿದ್ದಾರೆ. ರೈತರ ಬದುಕಿಗೆ ಬೆಳಕಾಗಿ ಗ್ರಾಮೀಣ ಪ್ರದೇಶದ ಅಭಿವೃದ್ಧಿಗೆ ಶ್ರಮಿಸಿದ ಶ್ರೀಗಳ ವಿಚಾರ ಧಾರೆಗಳು ನಮ್ಮೆಲ್ಲರ ಬದುಕಿಗೆ ದಾರಿದೀಪವಾಗಲಿ ಎಂದು ತಿಳಿಸಿದರು.

ಆಶೀರ್ವಚನ ದಯಪಾಲಿಸಿದ ಶ್ರೀ ಮಲೆ ಮಹದೇಶ್ವರ ಬೆಟ್ಟ, ಶ್ರೀ ಸಾಲೂರು ಬೃಹನ್ಮಠದ ಷ. ಬ್ರ ಡಾ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಗಳು ಜ್ಞಾನಾನ್ನ ದಾಸೋಹಿಗಳಾದ ರಾಜೇಂದ್ರ ಶ್ರೀಗಳವರ ಸೇವೆ ಅಪಾರವಾದದ್ದು. ಹೊಟ್ಟೆಯ ಹಸಿವಿಗಿಂತ, ಜ್ಞಾನದ ಹಸಿವು ದೊಡ್ಡದು. ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಸುತ್ತೂರು ಶ್ರೀಗಳು ತೆರೆಯದ ಶಿಕ್ಷಣ ಸಂಸ್ಥೆಗಳಿಲ್ಲ. ಮನುಷ್ಯ ಸದಾ ಪ್ರಜ್ಞಾವಂತನಾಗಿ , ಸನ್ಮಾರ್ಗದಲ್ಲಿ ನಡೆಯಬೇಕಾದರೆ ಅದು ಶಿಕ್ಷಣದಿಂದ ಮಾತ್ರ ಸಾಧ್ಯ, ಶ್ರೀಗಳವರ ತತ್ವ ಬೋಧನೆಗಳು ನಮ್ಮಗೆಲ್ಲರಿಗೂ ಆದರ್ಶವಾಗಬೇಕೆಂದು ಹಾರೈಸಿದರು.

ಕಾರ್ಯಕ್ರಮದಲ್ಲಿ 2024–25 ಸಾಲಿನ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಕನ್ನಡ ವಿಭಾಗದ ಮುಖ್ಯಸ್ಥರಾದ ಶ್ರೀ ಹೆಚ್.ಎಂ ನಾಗಭೂಷಣರವರು ಪ್ರಾಧ್ಯಾಪಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ. ಹೆಚ್ ಎಸ್ ಕೊಂಗಳಪ್ಪ, ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಎನ್ ಮಹದೇವಸ್ವಾಮಿ, ನರ್ಸಿಂಗ್ ಶಾಲೆಯ ಪ್ರಾಂಶುಪಾಲರಾದ ಶ್ರೀ ಹೇಮೇಶಮೂರ್ತಿ, ಶಿಕ್ಷಣ ಸಂಸ್ಥೆಯ ಸಿಬ್ಬಂದಿ ವರ್ಗ, ವಿದ್ಯಾರ್ಥಿಗಳು ಹಾಗೂ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಶ್ರೀಮಠದ ಭಕ್ತರು ಉಪಸ್ಥಿತರಿದ್ದರು.

ಶ್ರೀ ಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ ಶ್ರೀ ಮನ್ಮಹಾರಾಜ ರಾಜಗುರುತಿಲಕ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ 110ನೆಯ ಜಯಂತಿ ಮಹೋತ್ಸವ ಕಾರ್ಯಕ್ರಮ. ಚಿತ್ರದಲ್ಲಿ ಚಾಮುಲ್ ಅಧ್ಯಕ್ಷರಾದ ಶ್ರೀ ಎಂ ನಂಜುಂಡಸ್ವಾಮಿರವರ, ಶ್ರೀಮತಿ ಪರಿಮಳಾ ನಾಗಪ್ಪ, ಮಾಜಿ ಶಾಸಕರು ಕಾಮಗೆರೆ, ಷ.ಬ್ರ ಡಾ.ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮಿಗಳವರು, ಸಂಸ್ಕೃತಿ ಚಿಂತಕರಾದ ಶ್ರೀ ಶಂಕರ್ ದೇವನೂರುರವರು, ಶ್ರೀ ಎ.ಆರ್ ಕೃಷ್ಣಮೂರ್ತಿ, ವಿಧಾನ ಸಭಾ ಸದಸ್ಯರು, ಕೊಳ್ಳೇಗಾಲ, ಹನೂರಿನ ಯುವ ಮುಖಂಡರು ಹಾಗೂ ಉದ್ಯಮಿಗಳಾದ ಶ್ರೀ ಎಸ್ ನಿಶಾಂತ್‌ರವರು, ಪ್ರಾಚಾರ್ಯರಾದ ಡಾ.ಹೆಚ್.ಎಸ್.ಕೊಂಗಳಪ್ಪನವರು ಹಾಗೂ ಶ್ರೀ ತೋಟೆಶ್‌ರವರು.



ಸಂಸ್ಕೃತಿ ಚಿಂತಕರಾದ ಶ್ರೀ ಶಂಕರ್ ದೇವನೂರುರವರು ಆಶೀರ್ವಚನ ನೀಡುತ್ತಿರುವುದು.





# ಶಿಕ್ಷಣ ಕ್ರಾಂತಿ ಮಾಡಿದ ಶಿವರಾತ್ರಿ ರಾಜೇಂದ್ರಶ್ರೀ

## ಶಾಸಕ ಎ.ಆರ್.ಕೃಷ್ಣಮೂರ್ತಿ ಸ್ಮರಣೆ | ಕೊಳ್ಳೇಗಾಲದಲ್ಲಿ ಶತೋತ್ತರ ದಶಮಾನೋತ್ಸವ ಕಾರ್ಯಕ್ರಮ

**ವಿಕ ಸುದ್ದಿಲೋಕ** ಕೊಳ್ಳೇಗಾಲ

''ಶಿಕ್ಷಣಕ್ಕೆ ಹೆಚ್ಚು ಮಹತ್ವ ನೀಡಿದ್ದ ಪರಮ ಪೂಜ್ಯ ರಾಜೇಂದ್ರಶ್ರೀಗಳು, ಗ್ರಾಮೀಣ ಭಾಗದಲ್ಲಿ ಶಾಲೆಗಳನ್ನು ತೆರೆದು ಬಡ ಹಾಗೂ ಹೆಣ್ಣು ಮಕ್ಕಳ ಶಿಕ್ಷಣಕ್ಕೆ ಅವಕಾಶ ಮಾಡಿಕೊಟ್ಟವರು'' ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ಸ್ಮರಿಸಿದರು.

ಪಟ್ಟಣದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ನಡೆದ ಜಗದ್ಗುರು ಡಾ.ಶಿವರಾತ್ರಿ ರಾಜೇಂದ್ರ ಮಹಾ ಸ್ವಾಮೀಜಿ ಅವರ ಶತೋತ್ತರ ದಶಮಾನೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

''ಸುತ್ತೂರು ಶ್ರೀಮಠ ಯಾವುದೇ ಪ್ರತಿಫಲಾಪೇಕ್ಷೆ ಇಲ್ಲದೆ ಶಿಕ್ಷಣ ನೀಡುವ ಕೆಲಸ ಮಾಡುತ್ತಿರುವುದು ಹೆಮ್ಮೆಯ ಸಂಗತಿ. ರಾಷ್ಟ್ರವೇ ಮೆಚ್ಚುವಂತಹ ಶಿಕ್ಷಣ ಸಂಸ್ಥೆಯನ್ನು ನೋಯ್ಡಾದಲ್ಲಿ ನಡೆಸುತ್ತಿರುವುದು ಶಿಕ್ಷಣ ಕ್ಷೇತ್ರಕ್ಕೆ ಶ್ರೀಮಠ ನೀಡುತ್ತಿರುವ ಕೊಡುಗೆ ಏನು ಎಂಬುದಕ್ಕೆ ನಿದರ್ಶನವಾಗಿದೆ'' ಎಂದರು.

''ಸುತ್ತೂರು ಜಾತ್ರಾ ಮಹೋತ್ಸವದಲ್ಲಿ ಸಮಾಜದ ಒಳಿತಿಗೆ ಬೇಕಾದ ಕಾರ್ಯಕ್ರಮಗಳನ್ನು ರೂಪಿಸಿ ಗ್ರಾಮೀಣ ಭಾಗದ ಜನರಿಗೆ ಅರಿವು ಮೂಡಿಸುತ್ತಿರುವ ಶ್ರೀಮಠದ ಸಾಮಾಜಿಕ ಕಳಕಳಿಗೆ ಸಾಕ್ಷಿಯಾಗಿದೆ. ರಾಜೇಂದ್ರ ಮಹಾಸ್ವಾಮೀಜಿ ಅವರ ಸೇವೆಯನ್ನು ಸ್ಮರಿಸಿಕೊಳ್ಳುವುದು ಎಲ್ಲರ ಕರ್ತವ್ಯ'' ಎಂದರು.



ಕೊಳ್ಳೇಗಾಲದ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳ ಆವರಣದಲ್ಲಿ ನಡೆದ ಜಗದ್ಗುರು ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳ ಶತೋತ್ತರ ದಶಮಾನೋತ್ಸವ ಕಾರ್ಯಕ್ರಮವನ್ನು ಮಾಜಿ ಶಾಸಕಿ ಪರಿಮಳಾ ನಾಗಪ್ಪ ಉದ್ಘಾಟಿಸಿದರು.

ಯುವ ಉದ್ಯಮಿ ನಿಶಾಂತ್ ಮಾತನಾಡಿ, '' ರಾಜೇಂದ್ರ ಶ್ರೀಗಳ ದೂರದೃಷ್ಟಿಯ ಫಲವಾಗಿ ಗ್ರಾಮೀಣ ಭಾಗದ ಹೆಣ್ಣು ಮಕ್ಕಳು ಶಿಕ್ಷಣ ಪಡೆಯಲು ಸಾಧ್ಯವಾಯಿತು. ಹನೂರು ಭಾಗದ ಕಾಡಂಚಿನ ಭಾಗದ ಕುಗ್ರಾಮಗಳ ಬಡ ಮಕ್ಕಳಿಗೂ ಶಿಕ್ಷಣ ಲಭಿಸಬೇಕೆಂದು ಶಾಲಾ ಕಾಲೇಜುಗಳನ್ನು ತೆರೆದು ಶಿಕ್ಷಣ ಕ್ರಾಂತಿ ಮಾಡಿದವರು. ಶಿಕ್ಷಣದ ಜತೆಗೆ ಆರೋಗ್ಯಕ್ಕೆ ಹೆಚ್ಚಿನ ಮಹತ್ವ ನೀಡಿದ ಶ್ರೀಗಳನ್ನು ಪ್ರತಿದಿನ ನೆನಪಿಸಿಕೊಳ್ಳಬೇಕು. ಅವರ ಆದರ್ಶಗಳು ಯುವ ಪೀಳಿಗೆಗೆ ದಾರಿ ದೀಪವಾಗಿವೆ'' ಎಂದರು.

ಮಾಜಿ ಶಾಸಕಿ ಪರಿಮಳಾ ನಾಗಪ್ಪ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸಾನ್ನಿಧ್ಯ ವಹಿಸಿದ್ದ ಮಲೆ ಮದೇಶ್ವರ ಬೆಟ್ಟದ ಸಾಲೂರು ಬೃಹನ್ಮಠದ ಮಠಾಧೀಶ ಡಾ.ಶ್ರೀಶಾಂತ ಮಲ್ಲಿಕಾರ್ಜುನಸ್ವಾಮೀಜಿ ಆಶೀರ್ವಚನ ನೀಡಿದರು. ಸಂಸ್ಕೃತಿ ಚಿಂತಕ ಶಂಕರ್ ದೇವನೂರು ವಿಶೇಷ ಉಪನ್ಯಾಸ ನೀಡಿದರು.

ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ, ವೀರಶೈವ ಮಹಾಸಭಾ ತಾಲೂಕು ಅಧ್ಯಕ್ಷ ಪುಟ್ಟಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ಬಸವ ಸಮಿತಿಯ ಮಲ್ಲೇಶಪ್ಪ, ನಂದೀಶ್, ವೀರಭದ್ರಸ್ವಾಮಿ, ಕಾಲೇಜು ಪ್ರಾಂಶುಪಾಲ ಕೊಂಗಳಪ್ಪ ಇತರರಿದ್ದರು.

### ಭಾವಚಿತ್ರ ಮೆರವಣಿಗೆ

ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಜಗದ್ಗುರು ಡಾ.ಶಿವರಾತ್ರಿ ರಾಜೇಂದ್ರ ಮಹಾಸ್ವಾಮೀಜಿ ಅವರ 110 ನೇ ಜಯಂತ್ಯುತ್ಸವ ಅಂಗವಾಗಿ ಬೆಳ್ಳಿರಥದಲ್ಲಿ ಭಾವಚಿತ್ರವನ್ನಿರಿಸಿ ಮೆರವಣಿಗೆ ಮಾಡಲಾಯಿತು. ವಿವಿಧ ಕಲಾತಂಡಗಳೊಂದಿಗೆ ಪ್ರಮುಖ ರಸ್ತೆಯಲ್ಲಿ ಮೆರವಣಿಗೆ ನಡೆಯಿತು. ಕಾಲೇಜು ವಿದ್ಯಾರ್ಥಿಗಳು ಹಾಗೂ ಮುಖಂಡರು ಪಾಲ್ಗೊಂಡಿದ್ದರು. ಮೆರವಣಿಗೆ ವೇಳೆ ಡಾ. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ಸಮರ್ಪಿಸಲಾಯಿತು.

---

**ಡಾ.ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಅಭಿಪ್ರಾಯ** | **ರಾಜೇಂದ್ರ ಶ್ರೀಗಳ ಶತೋತ್ತರ ದಶಮಾನೋತ್ಸವ**

# ಶೈಕ್ಷಣಿಕ ಕ್ಷೇತ್ರಕ್ಕೆ ಮಠಗಳ ಕೊಡುಗೆ ಅಪಾರ

**ವಿಜಯವಾಣಿ ಸುದ್ದಿಜಾಲ** ಕೊಳ್ಳೇಗಾಲ

ಜಗದ್ಗುರು ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರು 19ನೇ ಶತಮಾನದಲ್ಲಿ ಶಿಕ್ಷಣ ಕಾಂತ್ರಿಯನ್ನೇ ನಡೆಸಿದರು ಎಂದು ಶ್ರೀ ಮಲೆ ಮಹದೇಶ್ವರ ಬೆಟ್ಟದ ಸಾಲೂರು ಬೃಹನ್ಮಠದ ಪೀಠಾಧಿಪತಿ ಡಾ.ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು.

ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜು ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ ಶತೋತ್ತರ ದಶಮಾನೋತ್ಸವ ಸಮಾರಂಭದಲ್ಲಿ ಮಾತನಾಡಿದರು.

1916ರಲ್ಲಿ ಸಾಕ್ಷರತೆ ಪ್ರಮಾಣ ಕೇವಲ ಶೇ.16 ರಷ್ಟಿತ್ತು. ಶ್ರೀಗಳು ಸಂಸ್ಕಾರಯುತ ಶಿಕ್ಷಣ ನೀಡಬೇಕೆಂಬ ನಿರ್ಧಾರ ಕೈಗೊಂಡು ಬಡವ-ಬಲಿಗ ಎಂಬ ಭೇದ ಎಣಿಸದೆ ಎಲ್ಲರಿಗೂ ಶಿಕ್ಷಣ ನೀಡುವ ಕಾಯಕವನ್ನು ಜೆಎಸ್‌ಎಸ್ ಸಂಸ್ಥೆ ಮೂಲಕ ನೆರವೇರಿಸಿದ್ದಾರೆ. ಇದನ್ನು ನಾವೆಲ್ಲರೂ ಸ್ಮರಿಸಬೇಕು. ನಾಡಿನಲ್ಲಿ ವೀರಶೈವ ಲಿಂಗಾಯತ ಮಠ-ಮಾನ್ಯಗಳು ಶಿಕ್ಷಣ ಕ್ಷೇತ್ರದಲ್ಲಿ ಸರ್ಕಾರ ಮಾಡುವ ಕೆಲಸವನ್ನು ಮಾಡಿದೆ ಎಂದರು.

ಸಂಸ್ಕೃತಿ ಚಿಂತಕ ಶಂಕರ ದೇವನೂರು ಮಾತನಾಡಿ, ವಿದ್ಯಾರ್ಥಿಗಳಿಗೆ ಪರಂಪರೆಗಳ ಬೇರಿನ ಪರಿಚಯ ಆಗಬೇಕಿದೆ. ನಾವೆಲ್ಲರೂ ಸುತ್ತೂರು ಭವ್ಯ ಗುರುಕುಲ ಪರಂಪರೆಯ ಬೆಳಕಿನ ಬಗ್ಗೆ ತಿಳಿಯಬೇಕಿದೆ. ಕಿರಿಯ ವಯಸ್ಸಿನಲ್ಲಿ ಮಠದ ಜವಾಬ್ದಾರಿ ಹೊತ್ತ ಶ್ರೀ ರಾಜೇಂದ್ರ ಸ್ವಾಮೀಜಿ ಅವರು ಕಷ್ಟದ ದಿನಗಳ ನಡುವೆ ಅಕ್ಷರ ದಾಸೋಹ ಮಾಡಿದ್ದಾರೆ. ವಿದ್ಯಾರ್ಥಿಗಳಿಗೆ ವಸತಿ ನಿಲಯಗಳನ್ನು ತೆರೆಯುತ್ತಾರೆ. ತಿನ್ನುವ ಅನ್ನಕ್ಕೂ ಕಷ್ಟವಿದ್ದಾಗ ಹಳ್ಳಿ-ಹಳ್ಳಿಗಳಲ್ಲಿ ದವಸ-ಧಾನ್ಯವನ್ನು ಬೇಡುತ್ತಾರೆ. ಈ ವೇಳೆ ದವಸ-ಧಾನ್ಯ ಸಿಗದ ಸಂದರ್ಭದಲ್ಲಿ ತಮ್ಮ ಕೊರಳಲ್ಲಿದ್ದ ಚಿನ್ನದ ಕರಡಿಗೆಯನ್ನು ಗಿರಿವಿ ಅಂಗಡಿಗೆ ಮಾರಿ ಹಸಿದ ಮಕ್ಕಳ ಹೊಟ್ಟೆ ತುಂಬಿಸಿದ್ದಾರೆ. ತಾವು ನೊವುಂಡು ಎಲ್ಲರಿಗೂ ಸಂತೋಷ ಕೊಟ್ಟಿದ್ದಾರೆ. ನಮಗೆಲ್ಲ ಸಂಸ್ಕಾರ ಕೊಟ್ಟಿದ್ದಾರೆ. ಅವರ ಆದರ್ಶದಲ್ಲಿ ನಾವೆಲ್ಲರೂ ಬದುಕಬೇಕಿದೆ ಎಂದು ಹೇಳಿದರು.



ಕೊಳ್ಳೇಗಾಲ ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜು ಆವರಣದಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮೀಜಿ ಅವರ ಶತೋತ್ತರ ದಶಮಾನೋತ್ಸವ ಸಮಾರಂಭದಲ್ಲಿ ಡಾ.ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ, ಶಂಕರ ದೇವನೂರು, ಎ.ಆರ್.ಕೃಷ್ಣಮೂರ್ತಿ, ಪರಿಮಳಾ ನಾಗಪ್ಪ, ಎಂ.ನಂಜುಂಡಸ್ವಾಮಿ ಇತರರು ಇದ್ದರು.

ಶಾಸಕ ಎ.ಆರ್.ಕೃಷ್ಣಮೂರ್ತಿ ಮಾತನಾಡಿ, ಜೆಎಸ್‌ಎಸ್ ಸಂಸ್ಥೆಯಲ್ಲಿ ಶಿಕ್ಷಣ ಪಡೆದವರು ಸಾಮಾಜಿಕ, ಶೈಕ್ಷಣಿಕ, ಆರ್ಥಿಕವಾಗಿ ಸ್ವಾವಲಂಬಿ ಜೀವನ ನಡೆಸುತ್ತಿದ್ದಾರೆ. ದೇಶ-ವಿದೇಶದಲ್ಲಿ ಜೆಎಸ್ ಎಸ್ ಸಂಸ್ಥೆ ಸೇವೆ ಒದಗಿಸುತ್ತಿದೆ. ಗ್ರಾಮೀಣ ಭಾಗದ ಮಕ್ಕಳಿಗೆ ಶಿಕ್ಷಣ ನೀಡುವ ಕಾರ್ಯ ಮಾಡುತ್ತಿದೆ ಎಂದರು.

ಮಾಜಿ ಶಾಸಕಿ ಪರಿಮಳಾ ನಾಗಪ್ಪ, ಚಾಮುಲ್ ಅಧ್ಯಕ್ಷ ಎಂ.ನಂಜುಂಡಸ್ವಾಮಿ, ಮುಖಂಡ ನಿಶಾಂತ್ ಮತ್ತಿತರಿದ್ದರು. ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಶ್ರೀ ರಾಜೇಂದ್ರ ಸ್ವಾಮೀಜಿ ಭಾವಚಿತ್ರ ಮೆರವಣಿಗೆಗೆ ಜೆಎಸ್‌ಎಸ್ ಕಾಲೇಜು ಆವರಣದಲ್ಲಿ ಚಾಲನೆ ನೀಡಲಾಯಿತು. ವಿವಿಧ ಕಲಾ ತಂಡಗಳೊಂದಿಗೆ ಪ್ರಮುಖ ರಸ್ತೆಯಲ್ಲಿ ಮೆರವಣಿಗೆ ನಡೆಯಿತು. ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ, ವೀರಶೈವ ಲಿಂಗಾಯತ ತಾಲೂಕು ಅಧ್ಯಕ್ಷ ಪುಟ್ಟಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ತೋಟೇಶ್, ಬಸವ ಸಮಿತಿಯ ಮಲ್ಲೇಶಪ್ಪ, ನಂದೀಶ್, ವೀರಭದ್ರಸ್ವಾಮಿ, ಜೆಎಸ್‌ಎಸ್ ಮಹಿಳಾ ಕಾಲೇಜು ಪ್ರಾಂಶುಪಾಲ ಕೊಂಗಳಪ್ಪ ಮತ್ತಿತರಿದ್ದರು.